# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ | : | 480 |
| ವಿಧಾನ ಪರಿಷತ್ ಸದಸ್ಯರ ಹೆಸರು | : | ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | : | 12.12.2024 |
| ಉತ್ತರಿಸಬೇಕಾದವರು | : | ಮಾನ್ಯ ಮುಖ್ಯಮಂತ್ರಿಗಳು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಉತ್ತರ ಕನ್ನಡ ಜಿಲ್ಲೆಯಲ್ಲಿ ಬಹುತೇಕ ಬುಡಕಟ್ಟು ಜನಾಂಗದ ಹಳ್ಳಿಗಳು ಕಾಲೋನಿ ರೂಪದಲ್ಲಿ ಇರದೆ ಒಂದೊಂದೆ ಮನೆಗಳು ದೂರ ದೂರದಲ್ಲಿ ಇರುವುದರಿಂದ ಸರಿಯಾದ ಕುಡಿಯುವ ನೀರಿನ ವ್ಯವಸ್ಥೆ, ಇಲ್ಲದೆ ಹತ್ತಿರದ ಹಳ್ಳ, ನದಿ, ಬೆಟ್ಟ ಮುಂತಾದವುಗಳಿಂದ ಬರುವ ನೀರನ್ನೇ ಕುಡಿಯಲು ಉಪಯೋಗಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಸರ್ಕಾರ ಈ ಬಗ್ಗೆ ತೆಗೆದುಕೊಂಡ ಕ್ರಮಗಳೇನು; | ಉತ್ತರ ಕನ್ನಡ ಜಿಲ್ಲೆಯಲ್ಲಿರುವ 119 ಹಾಡಿ/ಕಾಲೋನಿಗಳಿಗೆ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸಲಾಗಿದೆ. ಒಂದು ಎರಡು ಮನೆ ನಿರ್ಮಿಸಿಕೊಂಡು ಅರಣ್ಯದಲ್ಲಿ ವಾಸಿಸುವ ಕುಟುಂಬಗಳಿಗೆ ಶಾಶ್ವತ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲು ಅಗತ್ಯ ಕ್ರಮಕೈಗೊಳ್ಳಲಾಗುವುದು. |
| ಆ) | ಈ ಜಿಲ್ಲೆಯ ಬುಡಕಟ್ಟು ಜನಾಂಗದವರಿಗೆ ಕುಡಿಯುವ ನೀರಿಗಾಗಿ ವಿಶೇಷ ಅನುದಾನ ಘೋಷಿಸಿ ಇವರಿಗೆ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವ ಯೋಜನೆ ಸರ್ಕಾರಕ್ಕೆ ಇದೆಯೇ; ಹಾಗಿದ್ದಲ್ಲಿ ಮುಂದಿನ ಕ್ರಮಗಳ ಕುರಿತು ಮಾಹಿತಿ ಒದಗಿಸುವುದು? | ಸದರಿ ಜಿಲ್ಲೆಯ ಬುಡಕಟ್ಟು ಜನಾಂಗದವರಿಗೆ ಕುಡಿಯುವ ನೀರಿಗಾಗಿ ವಿಶೇಷ ಅನುದಾನವನ್ನು ಘೋಷಿಸಿ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವ ಯೋಜನೆ ರೂಪಿಸಲು ಅಗತ್ಯ ಕ್ರಮಕೈಗೊಳ್ಳಲಾಗುವುದು. |

**STW/SECB/STP/393/2024**

(ಸಿದ್ದರಾಮಯ್ಯ)
ಮುಖ್ಯಮಂತ್ರಿಗಳು